SRI DEVARAJ URS ACADEMY OF HIGHER EDUCATION & RESEARCH
SRI DEVARAJ URS MEDICAL COLLEGE
Tamaka, Kolar
UNIVERSITY LIBRARY & LEARNING RESOURCE CENTRE

Online Newspaper Clipping Service
**Dtd- Saturday, 03rd, March- 2018** **Page No. 07**

ವಿಜಯವಾಣಿ

# ಪರಿಸ್ಥಿತಿಗೆ ಪೂರಕ ಅಧ್ಯಯನ

## ಕಾರ್ಯಾಗಾರದಲ್ಲಿ ಅರಸು ವೈದ್ಯಕೀಯ ವಿವಿ ಕುಲಪತಿ ಡಾ. ಕುಮಾರ್ ಅಭಿಮತ

■ ವಿಜಯವಾಣಿ ಸುದ್ದಿಜಾಲ ಕೋಲಾರ

ಪರಿಸ್ಥಿತಿಗೆ ಪೂರಕವಾಗಿ ಜೀವಕೋಶ ಶಾಸ್ತ್ರದ ಕುರಿತು ವೈದ್ಯಕೀಯ ವಿದ್ಯಾರ್ಥಿಗಳು ಅಧ್ಯಯನ ನಡೆಸುವ ಅಗತ್ಯವಿದೆ ಎಂದು ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯ ಕುಲಪತಿ ಡಾ.ಎಸ್.ಕುಮಾರ್ ಹೇಳಿದರು.

ದೇವರಾಜ ಅರಸು ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಇಂಡಿಯನ್ ಅಕಾಡೆಮಿ ಆಫ್ ಸೈಟಾಲಜಿಸ್ಟ್ ರಾಜ್ಯ ಘಟಕದಿಂದ ಶುಕ್ರವಾರ ಆಯೋಜಿಸಿದ್ದ 5ನೇ ರಾಜ್ಯಮಟ್ಟದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಜೀವಕೋಶ ಶಾಸ್ತ್ರದ ವಿವಿಧ ವಿಭಾಗಗಳಲ್ಲಿ ನಿರೀಕ್ಷಿತ ಪ್ರಗತಿ ಸಾಧಿಸಲು ಸಾಧ್ಯವಾಗಿಲ್ಲ. 2000 ವರ್ಷದಿಂದೀಚೆ ಗಂಭೀರ ಪ್ರಯತ್ನ ನಡೆಯುತ್ತಿರುವುದರ ಫಲವಾಗಿ ಜೀವಶಾಸ್ತ್ರದ ಕಡೆ ವೈದ್ಯಕೀಯ ವಿದ್ಯಾರ್ಥಿಗಳು ಆಸಕ್ತಿ ತೆಗೆದುಕೊಳ್ಳುತ್ತಿದ್ದಾರೆ. ಜೀವಶಾಸ್ತ್ರದ ಬಗ್ಗೆ ಇರುವ ಆಲೋಚನಾ ಕ್ರಮ ಬದಲಿಸಿಕೊಳ್ಳಬೇಕು ಎಂದರು.

ಜೀವಕೋಶದ ಮೂಲಕವೂ ನಿರ್ದಿಷ್ಟ ಗುಣಲಕ್ಷಣದ ಮೂಲಕ ತೋಂದರೆ ಪತ್ತೆ ಹಚ್ಚಬಹುದು. ಅಕಾಡೆಮಿ ವೈದ್ಯಕೀಯ ಕಾಲೇಜುಗಳಲ್ಲಿ ಇಂತಹ ಕಾರ್ಯಾಗಾರ ಆಯೋಜಿಸುತ್ತಿದೆ ಎಂದರು.



ಕೋಲಾರದ ಶ್ರೀ ದೇವರಾಜ ಅರಸು ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಶುಕ್ರವಾರ ಆಯೋಜಿಸಿದ್ದ ರಾಜ್ಯಮಟ್ಟದ ಕಾರ್ಯಾಗಾರವನ್ನು ಮಹಾವಿದ್ಯಾಲಯ ಕುಲಪತಿ ಡಾ.ಎಸ್.ಕುಮಾರ್ ಉದ್ಘಾಟಿಸಿದರು.

ಇಂಡಿಯನ್ ಅಕಾಡಮಿ ಆಫ್ ಸೈಟಾಲಜಿಸ್ಟ್ ಕಾರ್ಯದರ್ಶಿ ಡಾ.ಯು.ಎಸ್.ದಿನೇಶ್ ಮಾತನಾಡಿ, ರಾಜ್ಯದಲ್ಲಿ ಜೀವಕೋಶ ಶಾಸ್ತ್ರದ ತಜ್ಞರ ಕೊರತೆ ಇದ್ದು, ವೈದ್ಯರ ಸಂಖ್ಯೆ ಹೆಚ್ಚಿಸಲು ತಜ್ಞರಿಂದ ಕಿರಿಯ ವೈದ್ಯಕೀಯ ವಿದ್ಯಾರ್ಥಿಗಳಿಗೆ ತರಬೇತಿ ಕೊಡಿಸುವ ಉದ್ದೇಶದಿಂದ ಸಮ್ಮೇಳನ ನಡೆಸಲಾಗುತ್ತಿದೆ ಎಂದರು. ಮಹಾವಿದ್ಯಾಲಯ ಉಪ ಕುಲಪತಿ ಡಾ.ಸಿ.ವಿ.ರಘುವೀರ್, ಟ್ರಸ್ಟಿ ಜೆ.ರಾಜೇಂದ್ರ, ರಿಜಿಸ್ಟ್ರಾರ್ ಡಾ.ಎ.ವಿ.ಎಂ.ಕುಟ್ಟಿ, ವೈದ್ಯಕೀಯ ಅಧೀಕ್ಷಕ ಡಾ.ವಿ.ಲಕ್ಷ್ಮಯ್ಯ, ಕಾರ್ಯನಿರ್ವಾಹಕ ಇಂಜಿನಿಯರ್ ಎಚ್. ಹನುಮಂತರಾವ್, ಕಾರ್ಯಕ್ರಮ ಸಂಯೋಜಕರಾದ ಡಾ.ಕೆ. ಮಂಜುಳಾ, ಡಾ. ಪ್ರಸಾದ್ ಉಪಸ್ಥಿತರಿದ್ದರು.

ಕನ್ನಡಪ್ರಭ

# ಮಾನಸಿಕ ರೋಗಿಗಳಿಗೆ ಸಮರ್ಪಕ ಚಿಕಿತ್ಸೆ ಅಗತ್ಯ

## ಮನೋವೈದ್ಯರಿಗೆ ಹಮ್ಮಿಕೊಂಡಿದ್ದ ಕಾರ್ಯಾಗಾರದಲ್ಲಿ ಡಾ.ಯು.ಎಸ್. ದಿನೇಶ್ ಅಭಿಮತ

**ಕನ್ನಡಪ್ರಭ ವಾರ್ತೆ** ಕೋಲಾರ

ಇತ್ತೀಚಿನ ದಿನಗಳಲ್ಲಿ ಮಾನಸಿಕ ರೋಗಿಗಳಿಗೆ ಸಮರ್ಪಕವಾಗಿ ಚಿಕಿತ್ಸೆ ದೊರೆಯದ ಖಿನ್ನತೆ ಒಳಗಾಗುತ್ತಿರುವುದು ವಿಷಾದಕರ ಸಂಗತಿ ಎಂದು ಮಾನಸಿಕ ತಜ್ಞ ಡಾ.ಯು.ಎಸ್.ದಿನೇಶ್ ಕಳವಳ ವ್ಯಕ್ತಪಡಿಸಿದರು.

ನಗರದ ದೇವರಾಜ ಅರಸು ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಇಂಡಿಯನ್ ಸೈಕಾಲಜಿಸ್ಟ್ ಅಕಾಡೆಮಿಯಿಂದ ಶುಕ್ರವಾರ ಸೈಕಾಲಜಿಸ್ಟ್ ವೈದ್ಯರಿಗಾಗಿ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಕಾರ್ಯಾಗಾರದಲ್ಲಿ ಮಾತನಾಡಿ, ರಾಜ್ಯದಲ್ಲಿ ಕೇವಲ ಬೆರಳೆಣಿಕೆಯಷ್ಟು ಮಂದಿ ಮಾತ್ರ ಸೈಕಾಲಜಿಸ್ಟ್‌ಗಲು ಕಾರ್ಯ ಕಾರ್ಯನಿರ್ವಹಿಸುತ್ತಿದ್ದಾರೆ.

ವೈದ್ಯರ ಸಂಖ್ಯೆ ಹೆಚ್ಚಿಸಲು ತಜ್ಞರಿಂದ ಕಿರಿಯ ವೈದ್ಯಕೀಯ ವಿದ್ಯಾರ್ಥಿಗಳಿಗೆ ತರಬೇತಿ ಕೊಡಿಸುವ ಉದ್ದೇಶದಿಂದ ಪ್ರತಿ ಜಿಲ್ಲಾ ಮಟ್ಟದಲ್ಲೂ ಸಮ್ಮೇಳನಗಳನ್ನು ನಡೆಸುವ ಮೂಲಕ ವೈದ್ಯರ ಸಂಖ್ಯೆಯನ್ನು ಹೆಚ್ಚಿಸಲಾಗುತ್ತದೆ ಎಂದು ಹೇಳಿದರು.

'ಮಾನಸಿಕ ಆರೋಗ್ಯ ಸಂಪನ್ಮೂಲಗಳ ಬಗ್ಗೆ 2002ರಲ್ಲಿ ನಡೆದಿದ್ದ ಸಮೀಕ್ಷೆ ಪ್ರಕಾರ ಭಾರತದಲ್ಲಿ ಮಾನಸಿಕ ತಜ್ಞ ವೈದ್ಯರ ಕೊರತೆ ಇದೆ' ಎಂದು ಉಪ ಕುಲಪತಿ ಡಾ.ಸಿ.ವಿ.ರಘುವೀರ್ ತಿಳಿಸಿದರು.

**ವಿದ್ಯಾರ್ಥಿಗಳಿಗೆ ತಿಳಿವಳಿಕೆ ಅಗತ್ಯ:** ಕುಲಪತಿ ಡಾ.ಎಸ್.ಕುಮಾರ್ ಮಾತನಾಡಿ, 'ಮಾನಸಿಕ ಆರೋಗ್ಯದ ಕುರಿತು ವೈದ್ಯಕೀಯ ವಿದ್ಯಾರ್ಥಿಗಳಿ ತಿಳಿವಳಿಕೆ ನೀಡಬೇಕಾದ ಅಗತ್ಯವಿದೆ. ಮಾನಸಿಕ ತೊಂದರೆಗಳನ್ನು ಕೂಡಾ ನಿರ್ದಿಷ್ಟ ಗುಣಲಕ್ಷಣಗಳ ಮೂಲಕ ಪತ್ತೆ ಹಚ್ಚಬಹುದು.

ಸೈಕೋಥೆರಪಿ ಮತ್ತು ಸೈಕಿಯಾಟ್ರಿಯ ಮೂಲಕ ಚಿಕಿತ್ಸೆ ನೀಡಬಹುದು ಎಂಬುದರ ಬಗ್ಗೆ ತರಬೇತಿ ನೀಡಲಾಗುತ್ತಿದ್ದು, ಇದರ ಪ್ರಯೋಜನೆ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಟ್ರಸ್ಟಿ ಜೆ.ರಾಜೇಂದ್ರ, ರಿಜಿಸ್ಟ್ರಾರ್ ಡಾ.ಎ.ವಿ.ಎಂ.ಕುಟ್ಟಿ, ವೈದ್ಯಕೀಯ ಅಧೀಕ್ಷಕ ಡಾ.ವಿ.ಲಕ್ಷ್ಮಯ್ಯ, ಕಾರ್ಯ ನಿರ್ವಾಹಕ ಎಂಜನಿಯರ್ ಎಚ್. ಹನುಮಂತರಾವ್, ವೈದ್ಯೆ ಡಾ.ಕೆ. ಮಂಜುಳಾ ಭಾಗವಹಿಸಿದ್ದರು.



ಭಾರತೀಯ ಮನೋರೋಗ ತಜ್ಞರ ಅಕಾಡೆಮಿ ಏರ್ಪಡಿಸಿದ್ದ ರಾಜ್ಯಮಟ್ಟದ ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದ ಗಣ್ಯರು.

ಪ್ರಜಾವಾಣಿ

3A ಕೋಲಾರ

ಶನಿವಾರ • ಮಾರ್ಚ್ 3, 2018 ಪ್ರಜಾವಾಣಿ

ರಾಜ್ಯ ಮಟ್ಟದ ಕಾರ್ಯಾಗಾರದಲ್ಲಿ ಜೀವಕೋಶ ವಿಜ್ಞಾನ ವೈದ್ಯ ಡಾ.ಯು.ಎಸ್.ದಿನೇಶ್ ಅಭಿಪ್ರಾಯ

# ಆರೋಗ್ಯಕ್ಕಿಂತ ದೊಡ್ಡ ಭಾಗ್ಯವಿಲ್ಲ

ಪ್ರಜಾವಾಣಿ ವಾರ್ತೆ

ಕೋಲಾರ: 'ಆರೋಗ್ಯಕ್ಕಿಂತ ದೊಡ್ಡ ಭಾಗ್ಯವಿಲ್ಲ. ಹಣ, ಆಸ್ತಿ ಸಂಪಾದನೆಗಿಂತ ಆರೋಗ್ಯ ಮುಖ್ಯ' ಎಂದು ಜೀವಕೋಶ ಶಾಸ್ತ್ರ ವೈದ್ಯ ಡಾ.ಯು.ಎಸ್.ದಿನೇಶ್ ಅಭಿಪ್ರಾಯಪಟ್ಟರು.

ಭಾರತೀಯ ಜೀವಕೋಶ ವಿಜ್ಞಾನ ವೈದ್ಯರ ಅಕಾಡೆಮಿಯು ನಗರದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಕಾರ್ಯಾಗಾರದಲ್ಲಿ ಮಾತನಾಡಿ, 'ಇತ್ತೀಚಿನ ದಿನಗಳಲ್ಲಿ ಜೀವಕೋಶ ಶಾಸ್ತ್ರ ವೈದ್ಯರ ಕೊರತೆಯಿಂದಾಗಿ ರೋಗಿಗಳಿಗೆ ಚಿಕಿತ್ಸೆ ಸಿಗುತ್ತಿಲ್ಲ. ಇದು ಆತಂಕಕಾರಿ ವಿಚಾರ ಎಂದು ಕಳವಳ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಜೀವಕೋಶ ಶಾಸ್ತ್ರ ತಜ್ಞರ ಸಂಖ್ಯೆ ಬೆರಳೆಣಿಕೆಯಷ್ಟಿದೆ. ವೈದ್ಯರ ಸಂಖ್ಯೆ ಹೆಚ್ಚಿಸುವ ನಿಟ್ಟಿನಲ್ಲಿ ಕಿರಿಯ ವೈದ್ಯಕೀಯ ವಿದ್ಯಾರ್ಥಿಗಳಿಗೆ ತರಬೇತಿ ಕೊಡಿಸಬೇಕು. ವೃತ್ತಿ ಸಂಬಂಧಿ ವಿಷಯಗಳ ಚರ್ಚೆಗಾಗಿ ಜಿಲ್ಲಾ ಮಟ್ಟದಲ್ಲಿ ಸಮ್ಮೇಳನ ನಡೆಸುತ್ತಿರುವುದು ಸ್ವಾಗತಾರ್ಹ' ಎಂದು ಹೇಳಿದರು.

'ಜೀವಕೋಶ ಆರೋಗ್ಯ ಕುರಿತು ವೈದ್ಯಕೀಯ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಬೇಕು. ಜೀವಕೋಶ ಸಮಸ್ಯೆಗಳನ್ನು ನಿರ್ದಿಷ್ಟ ಗುಣ ಲಕ್ಷಣದ ಮೂಲಕ ಪತ್ತೆ ಮಾಡಬಹುದು. ಈ ಸಮಸ್ಯೆಯಿಂದ ಬಳಲುತ್ತಿರುವ ರೋಗಿಗಳನ್ನು ನಿರ್ಲಕ್ಷಿಸದೆ ಸಕಾಲಕ್ಕೆ ಚಿಕಿತ್ಸೆ ಕೊಡಿಸಬೇಕು' ಎಂದು ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯದ ಕುಲಪತಿ ಡಾ.ಎಸ್.ಕುಮಾರ್ ಸಲಹೆ ನೀಡಿದರು.

**ಕೊರತೆ ಇದೆ:** '2002ರಲ್ಲಿ ನಡೆದಿದ್ದ ಸಮೀಕ್ಷೆಯ ಪ್ರಕಾರ ದೇಶದಲ್ಲಿ ಜೀವಕೋಶ ಶಾಸ್ತ್ರ ತಜ್ಞರ ಕೊರತೆ ಇದೆ' ಎಂದು ಮಹಾವಿದ್ಯಾಲಯದ ಉಪ ಕುಲಪತಿ ಡಾ.ಸಿ.ವಿ.ರಘುವೀರ್ ತಿಳಿಸಿದರು.

ಅಕಾಡೆಮಿ ವತಿಯಿಂದ ಮೊದಲ ಬಾರಿಗೆ ಬೆಂಗಳೂರಿನಲ್ಲಿ 1999ರಲ್ಲಿ ರಾಷ್ಟ್ರೀಯ ಸಮ್ಮೇಳನ ನಡೆಸಲಾಗಿತ್ತು. ಆರಂಭದಲ್ಲಿ ಸಮ್ಮೇಳನ ನಡೆಸಲು ಬೆಂಗಳೂರಿನ ವೈದ್ಯಕೀಯ ಕಾಲೇಜಿನಲ್ಲಿ ಅವಕಾಶ ಸಿಕ್ಕಿತು. ಅಂದಿನಿಂದ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಕಾರ್ಯಾಗಾರ, ತರಬೇತಿ ನಡೆಸಲಾಗುತ್ತಿದೆ. ಅಕಾಡೆಮಿಯ ಸದಸ್ಯತ್ವ ನೋಂದಣಿ ನಡೆಯುತ್ತಿದ್ದು, ಆಸಕ್ತರು ಹೆಸರು ನೋಂದಾಯಿಸಬಹುದು ಎಂದು ವಿವರಿಸಿದರು.

ದೇವರಾಜ ಅರಸು ಶಿಕ್ಷಣ ಟ್ರಸ್ಟ್‌ನ ನಿರ್ದೇಶಕ ಜಿ.ರಾಜೇಂದ್ರ, ರಿಜಿಸ್ಟ್ರಾರ್ ಡಾ.ಎ.ವಿ.ಎಂ.ಕುಟ್ಟಿ, ವೈದ್ಯಕೀಯ ಸೂಪರಿಂಟೆಂಡೆಂಟ್ ಡಾ.ಪಿ.ಲಕ್ಷ್ಮಯ್ಯ, ಕಾರ್ಯ ನಿರ್ವಾಹಕ ಎಂಜಿನಿಯರ್ ಎಚ್.ಹನುಮಂತರಾವ್, ವೈದ್ಯ ಡಾ.ಕೆ.ಮಂಜುಳಾ ಭಾಗವಹಿಸಿದ್ದರು.



ಭಾರತೀಯ ಜೀವಕೋಶ ಶಾಸ್ತ್ರ ವೈದ್ಯರ ಅಕಾಡೆಮಿಯು ಹಮ್ಮಿಕೊಂಡಿದ್ದ ಕಾರ್ಯಾಗಾರದಲ್ಲಿ ವೈದ್ಯರು ಹಾಗೂ ವೈದ್ಯಕೀಯ ವಿದ್ಯಾರ್ಥಿಗಳು ಪಾಲ್ಗೊಂಡರು

ಕೋಲಾರಪತ್ರಿಕೆ

ಜೀವಕೋಶಶಾಸ್ತ್ರಜ್ಞರ ಕಾರ್ಯಾಗಾರದಲ್ಲಿ ಡಾ|| ಕುಮಾರ್ ಕರೆ:

# ರೋಗಲಕ್ಷಣಶಾಸ್ತ್ರ ಅಧ್ಯಯನಕ್ಕೆ ಒತ್ತು ನೀಡಿ



ಕೋಲಾರ ಮಾ. ೨

ರೋಗಲಕ್ಷಣ ಶಾಸ್ತ್ರ, ಜೀವ ಕೋಶಶಾಸ್ತ್ರ ವಿಷಯದಲ್ಲಿ ಇಂದಿನ ಕಾಲಗುಣಕ್ಕೆ ಅನುಗುಣವಾಗಿ ವೈದ್ಯಕೀಯ ವಿದ್ಯಾರ್ಥಿಗಳು ಇನ್ನಷ್ಟು ಹೆಚ್ಚಿನ ಅಧ್ಯಯನ ನಡೆಸಬೇಕಾಗಿದೆ ಎಂದು ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯದ ಕುಲಪತಿ ಡಾ|| ಎಸ್.ಕುಮಾರ್ ಪ್ರತಿಪಾದಿಸಿದರು.

ಟಮಕದ ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯದಲ್ಲಿ ರಾಜ್ಯ ಜೀವಕೋಶ ಶಾಸ್ತ್ರ ಅಕಾಡೆಮಿಯು ಆಯೋಜಿಸಿದ್ದ ರಾಜ್ಯ ಮಟ್ಟದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು ರೋಗ ಲಕ್ಷಣಶಾಸ್ತ್ರದ ವಿವಿಧ ವಿಭಾಗಗಳಲ್ಲಿ ನಿರೀಕ್ಷಿತ ಪ್ರಗತಿ ಸಾಧಿಸಲು ಸಾಧ್ಯವಾಗಿಲ್ಲ, ಕಳೆದ ಎರಡು ದಶಕಗಳಿಂದ ಕೈಗೊಂಡ ಗಂಭೀರ ಪ್ರಯತ್ನಗಳಿಂದ ವೈದ್ಯಕೀಯ ವಿದ್ಯಾರ್ಥಿಗಳು ಆಸಕ್ತಿ ಬೆಳೆಸಿಕೊಳ್ಳುತ್ತಿದ್ದಾರೆ ಎಂದರು.

ವಿಷಯ ತಜ್ಞರಿಂದ ಸಿಗುವ ಮಾಹಿತಿ ಯಾವ ಪುಸ್ತಕ ಅಥವಾ ಅಂತರ್ಜಾಲದಲ್ಲಿ ದೊರಕಲು ಸಾಧ್ಯವಿಲ್ಲ, ವಿದ್ಯಾರ್ಥಿಗಳು ಕಾರ್ಯಾಗಾರದ ಸದುಪಯೋಗ ಪಡೆಯಬೇಕೆಂದರು.

ಭಾರತೀಯ ಜೀವಕೋಶ ಶಾಸ್ತ್ರಜ್ಞರ ಅಕಾಡಮಿ ಕಾರ್ಯದರ್ಶಿ ಡಾ|| ಯು.ಎಸ್.ದಿನೇಶ್ ಅವರು ಈಚಿನ ದಿನಗಳಲ್ಲಿ ಮಾನಸಿಕ ರೋಗಿಗಳಿಗೆ ಸಮರ್ಪಕ ಚಿಕಿತ್ಸೆ ದೊರೆಯದೆ ಖಿನ್ನತೆಗೆ ಒಳಗಾಗುತ್ತಿದ್ದಾರೆ. ರಾಜ್ಯದಲ್ಲಿ ಮನಶಾಸ್ತ್ರಜ್ಞರ ಕೊರತೆ ಇದೆಯೆಂದರು.

ಅರಸು ವೈದ್ಯಕೀಯ ಮಹಾ ವಿದ್ಯಾಲಯದ ಉಪ ಕುಲಪತಿ ಡಾ|| ಸಿ.ವಿ.ರಘುವೀರ್, ಟ್ರಸ್ಟಿ ಜೆ.ರಾಜೇಂದ್ರ, ರಿಜಿಸ್ಟ್ರಾರ್ ಡಾ.ಎ.ವಿ.ಎಂ.ಕುಟ್ಟಿ, ವೈದ್ಯಕೀಯ ಅಧೀಕ್ಷಕ ಡಾ|| ವಿ.ಲಕ್ಷ್ಮಯ್ಯ, ಕಾರ್ಯನಿರ್ವಾಹಕ ಎಂಜಿನಿಯರ್ ಎಚ್. ಹನುಮಂತರಾವ್, ಕಾರ್ಯಕ್ರಮದ ಸಂಯೋಜಕರಾದ ಡಾ|| ಕೆ.ಮಂಜುಳಾ, ಡಾ|| ಪ್ರಸಾದ್ ಉಪಸ್ಥಿತರಿದ್ದರು.

## ನಗರಸಭೆಯ ತ್ಯಾಜ್ಯ ವಿಲೇವಾರಿ ಘಟಕದಲ್ಲಿ ಬೆಂಕಿ ಅನಾಹುತ

ಶಿಡ್ಲಘಟ್ಟ ಮಾ. ೨

ತಾಲ್ಲೂಕಿನ ಹಿತ್ತಲಹಳ್ಳಿಯ ನಗರಸಭೆಯ ತ್ಯಾಜ್ಯ ವಿಲೇವಾರಿ ಘಟಕದಲ್ಲಿ ಬೆಂಕಿ ಹೊತ್ತಿ

ಕೋಲಾರ ಪ್ರಭ



# ಮಾನಸಿಕ ರೋಗಿಗಳಿಗೆ ಸಮರ್ಪಕ ಚಿಕಿತ್ಸೆ ಅಗತ್ಯ

## ಮಾನಸಿಕ ತಜ್ಞ ಡಾ.ಯು.ಎಸ್.ದಿನೇಶ್ ಅಭಿಪ್ರಾಯ



ಕೋಲಾರ: 'ಇತ್ತೀಚಿನ ದಿನಗಳಲ್ಲಿ ಮಾನಸಿಕ ರೋಗಿಗಳಿಗೆ ಸಮರ್ಪಕವಾಗಿ ಚಿಕಿತ್ಸೆ ದೊರೆಯದೆ ಖಿನ್ನತೆ ಒಳಗಾಗುತ್ತಿರುವುದು ವಿಷಾದಕರ ಸಂಗತಿ' ಎಂದು ಮಾನಸಿಕ ತಜ್ಞ ಡಾ.ಯು.ಎಸ್.ದಿನೇಶ್ ಕಳವಳ ವ್ಯಕ್ತಪಡಿಸಿದರು.

ನಗರದ ದೇವರಾಜ ಅರಸು ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಇಂಡಿಯನ್ ಸೈಕಲಜಿಸ್ಟ್ಸ್ ಅಕಾಡೆಮಿಯಿಂದ ಶುಕ್ರವಾರ ಸೈಕೋಲಜಿಸ್ಟ್ ವೈದ್ಯರಿಗಾಗಿ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಕಾರ್ಯಾಗಾರದಲ್ಲಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮಾನಸಿಕ ತಜ್ಞರ ಕೊರತೆಯಿಂದ ರೋಗಿಗಳ ಸಂಖ್ಯೆಯೂ ಹೆಚ್ಚಾಗುತ್ತಿರುವುದು ಆತಂಕಕಾರಿ ವಿಚಾರವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಕೇವಲ ಬೆರಳೆಣಿಕೆಯಷ್ಟು ಮಂದಿ ಮಾತ್ರ ಸೈಕೋಲಜಿಸ್ಟ್‌ಗಳು ಕಾರ್ಯನಿರ್ವಹಿಸುತ್ತಿದ್ದು, ವೈದ್ಯರ ಸಂಖ್ಯೆ ಹೆಚ್ಚಿಸಲು ತಜ್ಞರಿಂದ ಕಿರಿಯ ವೈದ್ಯಕೀಯ ವಿದ್ಯಾರ್ಥಿಗಳಿಗೆ ತರಬೇತಿ ಕೊಡಿಸುವ ಉದ್ದೇಶದಿಂದ ಪ್ರತಿ ಜಿಲ್ಲಾ ಮಟ್ಟದಲ್ಲೂ ಸಮ್ಮೇಳನಗಳನ್ನು ನಡೆಸುವ ಮೂಲಕ ವೈದ್ಯರ ಸಂಖ್ಯೆಯನ್ನು ಹೆಚ್ಚಿಸಲಾಗುತ್ತದೆ ಎಂದು ಹೇಳಿದರು.

'ಮಾನಸಿಕ ಆರೋಗ್ಯ ಸಂಪನ್ಮೂಲಗಳ ಬಗ್ಗೆ 2002ರಲ್ಲಿ ನಡೆದಿದ್ದ ಸಮೀಕ್ಷೆ ಪ್ರಕಾರ ಭಾರತದಲ್ಲಿ ಮಾನಸಿಕ ತಜ್ಞ ವೈದ್ಯರ ಕೊರತೆ ಇದೆ' ಎಂದು

2ನೇ ಪುಟಕ್ಕೆ...

# ಮಾನಸಿಕ ರೋಗಿಗಳಿಗೆ ಸಮರ್ಪಕ ಚಿಕಿತ್ಸೆ ಅಗತ್ಯ

1ನೇ ಪುಟದಿಂದ...

ಉಪ ಕುಲಪತಿ ಡಾ.ಸಿ.ವಿ.ರಘುವೀರ್ ತಿಳಿಸಿದರು.

ಇಂಡಿಯನ್ ಸೈಕಲಜಿಸ್ಟ್ಸ್ ಅಕಾಡೆಮಿಯಿಂದ 1999ರಲ್ಲಿ ಬೆಂಗಳೂರಿನಲ್ಲಿ ನಡೆದ ರಾಷ್ಟ್ರೀಯ ಸಮ್ಮೇಳನದ ನಂತರ, 2013ರಲ್ಲಿ ರಾಜ್ಯದ ಧಾರವಾಡದಲ್ಲಿ ಅಕಾಡೆಮಿಯನ್ನು ಆರಂಭಿಸಲಾಯಿತು, ಆರಂಭದಲ್ಲಿ ಸಮ್ಮೇಳನಗಳನ್ನು ನಡೆಸಲು ಬೆಂಗಳೂರಿನ ವೈದ್ಯಕೀಯ ಕಾಲೇಜಿನಲ್ಲಿ ಅವಕಾಶ ಸಿಕ್ಕಿತು. ಅಂದಿನಿಂದ ಪ್ರತಿ ಜಿಲ್ಲಾ ಮಟ್ಟದಲ್ಲೂ ಕಾರ್ಯಾಗಾರ, ತರಬೇತಿಗಳನ್ನು ನಡೆಸಿಕೊಂಡು ಬರುತ್ತಿದ್ದು, ಅದೇ ರೀತಿ ಅಕಾಡೆಮಿಯ ಸದಸ್ಯತ್ವ ನೊಂದಣಿ ಮಾಡಿಸಲಾಗುತ್ತಿದ್ದು, ಆಸಕ್ತರು ನೊಂದಾಯಿಸಿಕೊಳ್ಳುವಂತೆ ಕೋರಿದರು.

ಕುಲಪತಿ ಡಾ.ಎಸ್.ಕುಮಾರ್ ಮಾತನಾಡಿ, 'ಮಾನಸಿಕ ಆರೋಗ್ಯದ ಕುರಿತು ವೈದ್ಯಕೀಯ ವಿದ್ಯಾರ್ಥಿಗಳಿ ತಿಳುವಳಿಕೆ ನೀಡಬೇಕಾಗ ಅಗತ್ಯವಿದೆ' ಎಂದು ಅಭಿಪ್ರಾಯಪಟ್ಟರು. ಮಾನಸಿಕ ತೊಂದರೆಗಳನ್ನು ಕೂಡಾ ನಿರ್ದಿಷ್ಟ ಗುಣಲಕ್ಷಣಗಳ ಮೂಲಕ ಪತ್ತೆ ಹಚ್ಚಬಹುದು. ಸೈಕೋಥೆರಪಿ ಮತ್ತು ಸೈಕಿಯಾಟ್ರಿಯ ಮೂಲಕ ಚಿಕಿತ್ಸೆ ನೀಡಬಹುದು ಎಂಬುದರ ಬಗ್ಗೆ ತರಬೇತಿ ನೀಡಲಾಗುತ್ತಿದ್ದು, ಇದರ ಪ್ರಯೋಜನೆ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ಟ್ರಸ್ಟಿ ಜೆ.ರಾಜೇಂದ್ರ, ರಿಜಿಸ್ಟ್ರಾರ್ ಡಾ.ಎ.ವಿ.ಎಂ.ಕುಟ್ಟಿ, ವೈದ್ಯಕೀಯ ಅಧೀಕ್ಷಕ ಡಾ.ವಿ.ಲಕ್ಷ್ಮಯ್ಯ, ಕಾರ್ಯನಿರ್ವಾಹಕ ಎಂಜಿನಿಯರ್ ಎಚ್.ಹನುಮಂತರಾವ್, ವೈದ್ಯೆ ಡಾ.ಕೆ.ಮಂಜುಳಾ ಭಾಗವಹಿಸಿದ್ದರು.